**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.737/2025**

| | | |
|---|---|---|
| **ಫಿರ್ಯಾದುದಾರರು** | : | ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)<br>ವಿರುದ್ಧ |
| **ಆರೋಪಿತರು** | : | ಪ್ರಮೋದ್ ಯಾನೆ ಪೈಲ್ವಾನ್ ಮತ್ತು ಇನ್ನೊಬ್ಬರು. |

**ಶ್ರೀಮತಿ ಅನಿತ, ಬಿ.ಎ.(ಲಾ), ಎಲ್.ಎಲ್.ಬಿ., ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹುಣಸೂರು ಆದ ನಾನು ಈ ಕೆಳಗೆ ಕಾಣಿಸಿರುವಃ**

1. ಪ್ರಮೋದ್ ಯಾನೆ ಪೈಲ್ವಾನ್, ಬಿನ್ ಲೇಟ್ ಶ್ರೀನಾಥ, 28 ವರ್ಷ, ಕೂಲಿ,
2. ದರ್ಶನ್ ಯಾನೆ ಸಿದ್ದು ಯಾನೆ ಊಸು, ಬಿನ್ ಲೇಟ್ ಮಹೇಶ, 23 ವರ್ಷ,

ಇಬ್ಬರೂ ಸರಸ್ವತಿಪುರಂ, ಹುಣಸೂರು ಟೌನ್ ವಾಸಿಗಳು

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 05.06.2025ರಂದು ಸಂಜೆ 5.00 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯ ಮಂಟಿ ಸರ್ಕಲ್ ( ಎಂ ಡಿ ಸಿ ಸಿ ಸರ್ಕಲ್) ನ ಬಳಿ ಇರುವ ಚಾಸಾ-4 ಮುನ್ನಾ ರವರ ಟೀ ಹೋಟೇಲ್ ನ ಬಳಿ ಚಾಸಾ.1 ಸತ್ಯ.ಹೆಚ್.ಎನ್. ಮತ್ತು ಚಾಸಾ.2 ಶಿವಕುಮಾರ್ ರವರು ಟೀ ಪಡೆದು ಹೊರಗಡೆ ಬಂದು ಟೀ ಕುಡಿಯುತ್ತಿದ್ದಾಗ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಬಂದು ಚಾಸಾ.1ರವರ ಬಳಿ ಮದ್ಯಪಾನ ಮಾಡಲು ನಮಗೆ ಹಣ ಕೊಡು ಎಂದು ಕೇಳಿದ್ದು, ಅದಕ್ಕೆ ಚಾಸಾ.1ರವರು ನಿಮಗೆ ನಾನು ಏಕೆ ಹಣ ಕೊಡಬೇಕು ಎಂದು ಕೇಳಿದ್ದಕ್ಕೆ ನಿಮ್ಮ ಪೈಕಿ 1ನೇ ಆರೋಪಿಯಾದ ನೀವು ನನಗೆ ಮದ್ಯಪಾನ ಮಾಡಲು ಏಕೆ ಹಣ ಕೊಡುವುದಿಲ್ಲವೆಂದು ಏಕಾಏಕಿ ಅಲ್ಲೇ ಬಿದ್ದಿದ್ದ ಬಿಯರ್ ಬಾಟಲಿಯನ್ನು ತೆಗೆದುಕೊಂಡು ಚಾಸಾ.1ರವರ ತಲೆಯ ಎಡಭಾಗಕ್ಕೆ

ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ 115(2) ಸಹಕಲಂ.3(5) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಬಂದು ನಿಮ್ಮ ಪೈಕಿ 2ನೇ ಆರೋಪಿಯಾದ ನೀವು ಕೈಯಿಂದ ಚಾಸಾ.1ರವರ ಎಡಗಣ್ಣಿನ ಬಳಿ ಮತ್ತು ತುಟಿಯ ಮೇಲ್ಭಾಗಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಗಾಯ ಉಂಟು ಮಾಡಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ 118(1) ಸಹಕಲಂ.3(5) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**

ANITHA

Digitally signed by ANITHA
Date: 2026.04.06 17:56:32 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.737/2025**

**ಆರೋಪಿ ನಂ.1**

| | | |
|---|---|---|
| ಆಪಾದಿತನ ಹೆಸರು | : | ಪ್ರಮೋದ್ ಯಾನೆ ಪೈಲ್ವಾನ್, |
| ತಂದೆಯ ಹೆಸರು | : | ಲೇಟ್ ಶ್ರೀನಾಥ, |
| ವಯಸ್ಸು | : | 28 ವರ್ಷ, |
| ಉದ್ಯೋಗ | : | ಕೂಲಿ, |
| ವಾಸಸ್ಥಳ | : | ಸರಸ್ವತಿಪುರಂ, ಹುಣಸೂರು ಟೌನ್. |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ. 263ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 06.04.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA Digitally signed by ANITHA Date: 2026.04.06 17:56:38 +0530

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.737/2025**

**ಆರೋಪಿ ನಂ.2**

| | | |
|---|---|---|
| ಆಪಾದಿತನ ಹೆಸರು | : | ದರ್ಶನ್ ಯಾನೆ ಸಿದ್ದು ಯಾನೆ ಊಸು, |
| ತಂದೆಯ ಹೆಸರು | : | ಲೇಟ್ ಮಹೇಶ, |
| ವಯಸ್ಸು | : | 23 ವರ್ಷ, |
| ಉದ್ಯೋಗ | : | ಕೂಲಿ, |
| ವಾಸಸ್ಥಳ | : | ಸರಸ್ವತಿಪುರಂ, ಹುಣಸೂರು ಟೌನ್. |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ. 263ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 06.04.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**